# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 983 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : 15.12.2025 |
| ಉತ್ತರಿಸುವ ಸಚಿವರು | : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಂತ ಪ್ರಸ್ತುತ ಸಾಲಿನಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದು ಪಡಿಸಲಾಗಿದೆ; ಬಿ.ಪಿ.ಎಲ್ ಕಾರ್ಡ್ ರದ್ದು ಪಡಿಸಲು ಇರುವ ಮಾನದಂಡಗಳು ಯಾವುವು; (ವಿವರ ನೀಡುವುದು) | ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.<br>1. CBDT Income Group Annual Income > 1,20,000<br>2. GSTN Gross Turnover >25 Lacs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC >12 Months<br>8. PDS Silent RC 6-12 Months<br>9. PDS Single Member Below 18 Years<br>10. PM KISAN Land Holding >7.5 Acres<br>11. UIDAI Aadhaar Status Deceased<br>12. Vehicle Ownership value Owning LIGHT MOTOR VEHICLE<br>13. Vehicle Ownership value Owning MEDIUM MOTOR VEHICLE<br>14. Vehicle Ownership value Owning OTHER THAN MENTIONED ABOVE<br><br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br><br>1 ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ |

| | | |
|---|---|---|
| | | ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಸದರಿ ಮಾನದಂಡಗಳ ವಿರುದ್ಧವಾಗಿ ಪಡೆದಿರುವ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆಹಚ್ಚಿ ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿರುತ್ತದೆ. |
| ಆ | ವೈಟ್ ಬೋರ್ಡ್ ನಾಲ್ಕು ಚಕ್ರ ವಾಹನ ಹೊಂದಿದ ಗ್ರಾಹಕರ ಬಿ.ಪಿ.ಎಲ್ ಕಾರ್ಡ್‌ನ್ನು ಯಾವ ರೀತಿಯಲ್ಲಿ ರದ್ದುಪಡಿಸಲಾಗುತ್ತದೆ? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ |

ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ **1000** ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು

3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು
4. ಕುಟುಂಬದ ವಾರ್ಷಿಕ ಆದಾಯವು ರೂ. **1.20** ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು

ಆಯುಕ್ತರು, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು ರವರ ಪತ್ರ ದಿನಾಂಕ: **12.07.2021**ರಲ್ಲಿ ಸಾರಿಗೆ ಇಲಾಖೆಯಿಂದ ನೀಡಲಾಗಿದ್ದ ನಾಲ್ಕು, ಚಕ್ರದ ವಾಹನಗಳ ಮಾಹಿತಿಯನು ಈ ಕೆಳಕಂಡ ಮಾರ್ಗಸೂಚಿ /ಷರತ್ತುಗಳಂತೆ ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಸೂಚಿಸಲಾಗಿತ್ತು.

ಸಾರಿಗೆ ಇಲಾಖೆ ನೀಡಿರುವ ನಾಲ್ಕು, ಚಕ್ರದ ಕುಟುಂಬಗಳು ಅಂತ್ಯೋದಯ ಅನ್ನ/ಆದ್ಯತಾ ಪಡಿತರ ಚೀಟಿಗಳನು ಹೊಂದಿರುವ ಮಾಹಿತಿಯನು ಭೌತಿಕವಾಗಿ ಸ್ಥಳ ಪರಿಶೀಲನೆ ಮಾಡಿ, ಅಂತಹ ಪಡಿತರ ಚೀಟಿದಾರರ ಮೇಲೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಿ ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಬೇಕು.

ಸ್ಥಳ ಪರಿಶೀಲನೆ ನಡೆಸದೇ ಅಂತ್ಯೋದಯ ಅನ/ಆದ್ಯತಾ ಪಡಿತರ ಚೀಟಿಯಿಂದ ಆದ್ಯತೇತರ ಪಡಿತರ ಚೀಟಿಗಳನ್ನು ಪರಿವರ್ತಿಸಿದರೆ, ಅದರಿಂದಾಗುವ ಸಾಧಕ-ಭಾದಕಗಳನ್ನು ಆಹಾರಶಿರಸ್ತೇದಾರರು/ ಆಹಾರ ನಿರೀಕ್ಷಕರು ಹೊಣೆಗಾರರನ್ನಾಗಿ ಮಾಡಲಾಗುವುದು

ನಾಲ್ಕು ಚಕ್ರದ ವಾಹನ ಹೊಂದಿರುವ ಅನರ್ಹ ಪಡಿತರ ಚೀಟಿಗಳನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಿ, ಅಂತಹ ಪಡಿತರ ಕುಟುಂಬಗಳು ಕಂಡು ಬಂದ ಹಿನ್ನೆಲೆಯಲ್ಲಿ ದಂಡ ವಿಧಿಸಿ ಕ್ರಮಕೈಗೊಳ್ಳತಕ್ಕದ್ದು

ನಾಲು. ಚಕ್ರದ ವಾಹನ ಹೊಂದಿರುವ ಅನರ್ಹ ಪಡಿತರ ಚೀಟಿಗಳ ಮೇಲೆ ಕೈಗೊಂಡ ಕ್ರಮದ ಬಗ್ಗೆ ಗೂಗಲ್ ಶೀಟ್‌ನಲ್ಲಿ ಮಾಹಿತಿಯನ್ನು ಸಲ್ಲಿಸತಕ್ಕದ್ದು.

ಮೇಲ್ಕಂಡ ಆದೇಶದ ಮೇರೆಗೆ ಆಯುಕ್ತರು, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು ರವರ ಪತ್ರ ದಿನಾಂಕ: **24.08.2021** ರನ್ವಯ ನಾಲ್ಕು ಚಕ್ರ ವಾಹನದ ವೈಯಕ್ತಿಕ ವಾಹನ ಹೊಂದಿರುವ ಅಂತ್ಯೋದಯ ಅನ್ನ /ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸುವ ಆದೇಶವನ್ನು ತಡೆಹಿಡಿಯಲಾಗಿರುತ್ತದೆ.

ಇ-ಆನಾಸ 334 ಡಿಆರ್ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು